# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರು ವಾರ್ಡ್ ಸಂಖ್ಯೆ: 89- ಜೋಗುಪಾಳ್ಯ ವಾರ್ಡಿನ ದಿನಾಂಕ: 30.12.2021 ರಂದು ನಡೆದ ಸಭೆಯ ನಡವಳಿಗಳು**

ಮಾನ್ಯ ಆಯುಕ್ತರು ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: **ಬಿ12(5)ಪಿಆರ್/35/2020-21/21-09-2020** ರ ಆದೇಶದಂತೆ ದಿನಾಂಕ: 30.12.2021 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜೋಗುಪಾಳ್ಯ ವಾರ್ಡ್ ಸಂಖ್ಯೆ-89 ಸಭೆ ಕಿನೋಪಿ ಹೋಟೆಲ್ ಪಿ ಯು ಕಟ್ಟಡ 2ನೇ ಮಹಡಿ ಎಂ.ಜಿ ರಸ್ತೆ, ಬೆಂಗಳೂರು - ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯ ದಿನಾಂಕ:30.12.2021 ರಂದು ನಡೆಯಿತು.

## ಸಭೆಗೆ ಹಾಜರಿದ್ದವರ ವಿವರಗಳು

1) ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ, ಅಧ್ಯಕ್ಷರು.
2) ಶ್ರೀ.ಬಿ ಮಹೇಶ್ ಕುಮಾರ್, ನೋಡಲ್ ಅಧಿಕಾರಿ,ಸಹಾಯಕ ನಿಯಂತ್ರಕರು ಹಣಕಾಸು (ಪೂರ್ವ)
3) ಶ್ರೀ. ಮೂರ್ತಿ, ವಾರ್ಡ್ ಸಮಿತಿಯ ಕಾರ್ಯದರ್ಶಿ, ಸಹಾಯಕ ಅಭಿಯಂತರರು ಹಾಗೂ ಬಿಬಿಎಂಪಿ ಇತರ ವಿಭಾಗಗಳ ಅಂದರೆ, ಅರಣ್ಯ ಆರೋಗ್ಯ, ಕಾಮಗಾರಿ, ಘನತಾಜ್ಯ ವಿಭಾಗ, ಅಧಿಕಾರಿಗಳು, ಬೆಸ್ಕಾಂ ಮತ್ತು BWSSB ಅಧಿಕಾರಿಗಳು ಹಾಜರಿದ್ದರು.
4) ವಾರ್ಡ್ ಸಮಿತಿ ಸದಸ್ಯರಾದ, ಶ್ರೀಮತಿ ಗಾಯತ್ರಿ, ಶ್ರೀ ರಮೇಶ್ ರೆಡ್ಡಿ, ಶ್ರೀ ಉಮೇಶ್, ಶ್ರೀಮತಿ ವಿಜಯಲಕ್ಷ್ಮೀ, ರವರು ಸಭೆಗೆ ಹಾಜರಿದ್ದರು,

ಸಭೆಯನ್ನು ಪ್ರಾರಂಭಿಸುತ್ತಾ ಮೊದಲನೆಯದಾಗಿ ನೋಡಲ್ ಅಧಿಕಾರಿಯವರು ಸಭೆಗೆ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಶಾಸಕರು ಮತ್ತು ಹಾಜರಿದ್ದ ಅಧಿಕಾರಿಗಳನ್ನು ಮತ್ತು ಅಹ್ವಾನಿತರಾಗಿದ್ದ ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ವಾರ್ಡ್ ಸಮಿತಿ ಸಭೆಯಲ್ಲಿ ನೀಡಿರುವ ಈ ಕೆಳಕಂಡ ವಾರ್ಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

1) ವಾರ್ಡಿನಲ್ಲಿ ಬೀದಿ ದೀಪಗಳಿಗೆ ಎಲ್.ಇ.ಡಿ ಬಲ್ಬ್‌ಗಳನ್ನು ಅಳವಡಿಸುವ ಬಗ್ಗೆ- ಬಿಬಿಎಂಪಿ ವಿದ್ಯುತ್ ವಿಭಾಗದವರು ಕ್ರಮವಹಿಸಲು ಸೂಚಿಸಲಾಗಿದೆ.
2) ಬಿಬಿಎಂಪಿ ಬಾಲಕರ ಪ್ರೌಡ ಶಾಲೆ ಕಾಂಪೌಂಡ್‌ನಲ್ಲಿರುವ ಡೆಬ್ರಿಸ್‌ಗಳನ್ನು (ಅವಶೇಷಗಳನ್ನು) ತೆರವುಗೊಳಿಸುವುದು, ಬಿಬಿಎಂಪಿ, SWM JHI ಕ್ರಮವಹಿಸಲು ಸೂಚಿಸಲಾಗಿದೆ..

3) ವಾರ್ಡಿನಲ್ಲಿರುವ ಅಂಗನವಾಡಿಯಲ್ಲಿ ಅಡಿಗೆ ಮನೆಯನ್ನು ನಿರ್ಮಿಸುವುದು ಹಾಗೂ ನವೀಕರಣಗೊಳಿಸುವುದು-ಬಿಬಿಎಂಪಿ ಅಭಿಯಂತರ ವಿಭಾಗದವರು ಕ್ರಮವಹಿಸಲು ಸೂಚಿಸಲಾಗಿದೆ.

4) ಅಪ್ಪಯ್ಯ ಗಾರ್ಡನ್ 2ನೇ ರಸ್ತೆಯಲ್ಲಿ ಕಾಂಕ್ರೀಟ್ ಹಾಕುವುದು ಬಿಬಿಎಂಪಿ ಅಭಿಯಂತರ ವಿಭಾಗದವರು ಹಾಗೂ BWSSB ರವರು ಕ್ರಮವಹಿಸಲು ಸೂಚಿಸಲಾಗಿದೆ.

5) ವಾರ್ಡಿನಲ್ಲಿರುವ ಅಂಗಯ್ಯನಪಾಳ್ಯದಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು ಬಿಬಿಎಂಪಿ ಅಭಿಯಂತರ ವಿಭಾಗದವರು ಕ್ರಮವಹಿಸಲು ಸೂಚಿಸಲಾಗಿದೆ.

6) ವಾರ್ಡಿನಲ್ಲಿ ಮರಗಳ ಕೊಂಬೆಗಳನ್ನು Trim ಮಾಡುವುದು ಬಿಬಿಎಂಪಿ ಅರಣ್ಯ ವಿಭಾಗದವರು ಕ್ರಮವಹಿಸಲು ಸೂಚಿಸಲಾಗಿದೆ.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯಗಳನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು ಕೈಗೊಂಡ ಕ್ರಮದ ವರದಿಯನ್ನು ನೀಡಲು ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

**ನೋಡೆಲ್ ಅಧಿಕಾರಿಗಳು**
**ವಾರ್ಡ್ ಸಂಖ್ಯೆ-89- ಜೋಗುಪಾಳ್ಯ**
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಕಾರ್ಯದರ್ಶಿ**
**ಸಹಾಯಕ ಅಭಿಯಂತರರು**
ವಾರ್ಡ್ ಸಂಖ್ಯೆ-89- ಜೋಗುಪಾಳ್ಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಪ್ರತಿಯನ್ನು:</u>

1) ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
3) ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
4) ಮಾನ್ಯ ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
5) ವಾಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
6) ಕಛೇರಿ ಪ್ರತಿ